## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: :2020-21 ದಿನಾಂಕ: 22.06.2021

### ವಾರ್ಡ್ ಸಮಿತಿ ಸಭೆ ನಡವಳಿಗಳು

**ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)/ಪಿ.ಆರ್/35/2020-21, ದಿನಾಂಕ: 16.04.2021ರ ಆದೇಶದಂತೆ ದಿನಾಂಕ: 22.06.2021ರಂದು ನಡೆದ ಬಾಗಲಗುಂಟೆ ವಾರ್ಡ್ ನಂ. 14 ರ ಸಭೆಯ ನಡವಳಿಗಳು:-**

**ಸಭೆಗೆ ಹಾಜರಾಗಿದ್ದವರ ವಿವರಗಳು:-**

| ಕ್ರಸಂ | ಹೆಸರು ಶ್ರೀಮತಿ / ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ. ಮರುಳಸಿದ್ಧಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ. ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್-14 |
| 3 | ಶ್ರೀ. ಮೋಹನ್ ಗೌರೋಜಿ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಶ್ರೀಮತಿ. ಡಾ॥ ಚಂದನ | ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 5 | ಶ್ರೀಮತಿ. ಡಾ॥ ಹರ್ಷಿತ | ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 6 | ಶ್ರೀ.ಟಿ.ವೀರಪ್ಪ | ಎ.ಎಸ್.ಐ, ಸಂಚಾರಿ ಆರಕ್ಷಕ ನಿರೀಕ್ಷಕರು, ಪೀಣ್ಯ ಪೋಲಿಸ್ ಠಾಣೆ |
| 7 | ಶ್ರೀ. ಪಂಚಾಕ್ಷರಿ | ಎ.ಎಸ್.ಐ, ಬಾಗಲಗುಂಟೆ |
| 8 | ಶ್ರೀ. ವೆಂಕಟರಮಣಪ್ಪ | ವಾಟರ್ ಇನ್ಸ್ಪೆಕ್ಟರ್, ಬಿಡಬ್ಲ್ಯುಎಸ್.ಎಸ್.ಬಿ |
| 9 | ಶ್ರೀ. ಶಿವಲಿಂಗಯ್ಯ | ಕಂದಾಯ ಅಧಿಕಾರಿಗಳು, ಬಾಗಲಗುಂಟೆ |
| 10 | ಶ್ರೀ. ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಹಿತರಕ್ಷಣಾ ಸಮಿತಿ |
| 11 | ಶ್ರೀ. ಲಕ್ಷ್ಮಿ ವೆಂಕಟೇಶ್ | ಮುನಿಕೊಂಡಪ್ಪ ಬಡಾವಣೆ, ನಾಗರೀಕ ಹಿತರಕ್ಷಣಾ ಸಮಿತಿ |
| 12 | ಶ್ರೀ. ಮುದ್ದ ಹನುಮೇಗೌಡರು | ನಾಗರೀಕ ಹಿತರಕ್ಷಣಾ ಸಮಿತಿ, ಸಿಡೇದಹಳ್ಳಿ |
| 13 | ಶ್ರೀ, ಸದಾಶಿವ | ನಾಗರೀಕ ಹಿತರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |
| 14 | ಶ್ರೀ. ರಾಮೇಗೌಡರು | ನಾಗರೀಕ ಹಿತರಕ್ಷಣಾ ಸಮಿತಿ, ಭುವನೇಶ್ವರಿ ನಗರ |

ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪಧಾದಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

- ಈ ಹಿಂದಿನ ಸಭೆಯ ಸಭಾ ನಡವಳಿಯ ಬಗ್ಗೆ ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆಧ್ಯತೆಯ ಮೇಲೆ ಪೂರೈಸುವಂತೆ ಸಂಭಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.
- **ವಾರ್ಡ್ ಮಟ್ಟದಲ್ಲಿ WDC (Ward Decentralized Triage and Emergency Response (DETER) Committee for Covid 19 Management) ಸಮಿತಿಯ ಬಗ್ಗೆ:-**

ನೋಡಲ್ ಅಧಿಕಾರಿ ರವರು ಮಾನ್ಯ ಸರ್ಕಾರದ ಆದೇಶ ಸಂಖ್ಯೆ No: RD 158 TNR 2020 (1) ದಿನಾಂಕ: 07.05.2021 ರಲ್ಲಿ ಬೆಂಗಳೂರಿನಲ್ಲಿ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-19 ಸಾಂಕ್ರಾಮಿಕ ರೋಗ ನಿಯಂತ್ರಣಕ್ಕೆ ಸಂಬಂದಿಸಿದಂತೆ ತೆಗೆದುಕೊಳ್ಳಬೇಕಾದ ಕ್ರಮ ಹಾಗೂ ಈ ಕುರಿತು ವಲಯ ಮಟ್ಟದಲ್ಲಿ ಕೋವಿಡ್ ಕೇರ್ ಸೆಂಟರ್ ಅನ್ನು ಈಗಾಗಲೇ ಮಂಜುನಾಥ ನಗರದ ಕಾರ್ಮಿಕ ಭವನದಲ್ಲಿ

ಸ್ಥಾಪಿಸಲಾಗಿದ್ದು, ಸುಮಾರು 130 ಹಾಸಿಗೆಗಳ ವ್ಯವಸ್ಥೆಯನ್ನು ಮಾಡಲಾಗಿದ್ದು, ವ್ಯವಸ್ಥಿತವಾಗಿ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ವಾರ್ಡ್ ನಂ. 13ರ ಇಂದಿರಾ ಕ್ಯಾಂಟೀನ್ ಪಕ್ಕದಲ್ಲಿ ಬಿಬಿಎಂಪಿ ವತಿಯಿಂದ ನೂತನವಾಗಿ ನಿರ್ಮಿಸಿರುವ ಡಯಾಲಿಸಿಸ್ ಕಟ್ಟಡದಲ್ಲಿ **Triage** ಕೇಂದ್ರ ಸ್ಥಾಪಿಸಿದ್ದು, ಎಲ್ಲಾ ರೀತಿಯ ವ್ಯವಸ್ಥೆಗಳನ್ನು ಮಾಡಿದ್ದು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು ಹಾಗೂ ವಾರ್ಡ್‌ನಲ್ಲಿ ಸ್ಥಾಪಿಸಿರುವ **Triage** ಕೇಂದ್ರ ಹಾಗೂ ಕೋವಿಡ್ ಆರೈಕೆ ಕೇಂದ್ರವನ್ನು ಕೋವಿಡ್ – 19 ಸಾಂಕ್ರಾಮಿಕ ರೋಗದ 3ನೇ ಅಲೆಯು ಪ್ರಾರಂಭವಾಗುವ ಸಾಧ್ಯತೆ ಇರುವುದರಿಂದ ಎರಡೂ ಸೆಂಟರ್ ಅನ್ನು ಮುಂದುವರೆಸಬೇಕೆಂದು ಸರ್ವಾನುಮತದಿಂದ ತೀರ್ಮಾನಿಸಲಾಯಿತು.

(ಕ್ರಮ:ಆರೋಗ್ಯ ವೈದ್ಯಾಧಿಕಾರಿಗಳು (ದಾಸರಹಳ್ಳಿ) ವಲಯ / ಆರೋಗ್ಯ ಅಧಿಕಾರಿಗಳು, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ)

- ರಾಜಕಾಲುವೆ ಬಗ್ಗೆ:-

ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಮಳೆಯಾಗುತ್ತಿರುವುದರಿಂದ ಭುವನೇಶ್ವರಿ ನಗರ, ಸಿದ್ದೇಶ್ವರ ಬಡಾವಣೆ, ರಾಯಲ್ ಎನ್ ಕ್ಲೇವ್, ಬಿ.ಟಿ.ಎಸ್. ಬಡಾವಣೆ, ಶೇಷಾದ್ರಿ ಬಡಾವಣೆ, ಮುನೇಶ್ವರ ನಗರ ಬಡಾವಣೆಗಳ ರಾಜಕಾಲುವೆಯಲ್ಲಿ ತುಂಬಿರುವ ಹೂಳನ್ನು ತುರ್ತಾಗಿ ತೆಗೆಯಲು ಸಂಬಂಧಪಟ್ಟವರಿಗೆ ಸೂಚಿಸಲು ಸರ್ವಾನುಮತದಿಂದ ತೀರ್ಮಾನಿಸಲಯಿತು ಹಾಗೂ ರಾಜಕಾಲುವೆ ವಿಭಾಗದ ಅಭಿಯಂತರರುಗಳು ಸಭೆಗೆ ಹಾಜರಾಗದಿರುವ ಬಗ್ಗೆ ಸಮಿತಿ ಸದಸ್ಯರು ತಮ್ಮ ಅಸಮಾಧಾನ ವ್ಯಕ್ತಪಡಿಸಿದರು. ಮುಂದಿನ ಸಭೆಗೆ ಹಾಜರಾಗುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಪತ್ರ ಮುಖಾಂತರ ಮತ್ತು ದೂರವಾಣಿ ಮುಖಾಂತರ ತಿಳಿಸುವಂತೆ ಸದಸ್ಯ ಕಾರ್ಯದರ್ಶಿ ಮತ್ತು ವಾರ್ಡ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

(ಕ್ರಮ: ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು/ ಕಾರ್ಯಪಾಲಕ ಅಭಿಯಂತರರು (ರಾಜಕಾಲುವೆ ವಿಭಾಗ)

- ರಸ್ತೆ ಗುಂಡಿ ಹೂಳು ತೆಗೆಯುವುದು, ಕಸ ವಿಲೇವಾರಿ:-

ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳು ರಸ್ತೆ ಗುಂಡಿ, ಹೂಳು ತೆಗೆಯುವ ಬಗ್ಗೆ ಮತ್ತು ಕಸವಿಲೇವಾರಿ ಬಗ್ಗೆ ಚರ್ಚಿಸಿ ಕಾಮಗಾರಿಗಳು ಪ್ರಾರಂಭವಾಗಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು.

ಪ್ರಸ್ತುತ ರಾಜ್ಯಾದ್ಯಂತ ಕೋವಿಡ್–19ಗೆ ಸಂಬಂಧಿಸಿದಂತೆ, ಲಾಕ್ ಡೌನ್ ಜಾರಿಯಾಗಿದ್ದು, ಕಾರ್ಮಿಕರ ಕೊರತೆ ಇರುವುದರಿಂದ ಕನಿಷ್ಠ ಸಂಖ್ಯೆಯ ಕಾರ್ಮಿಕರು ಕರ್ತವ್ಯ ನಿರ್ವಹಿಸುತ್ತಿದ್ದು, ಆದ್ಯತೆಯ ಮೇಲೆ ಕಾರ್ಯ ನಿರ್ವಹಿಸುತ್ತಿರುವುದಾಗಿ ವಾರ್ಡ್ ಅಭಿಯಂತರರು ತಿಳಿಸಿದರು.

ಕೆಲವು ಬಡಾವಣೆಗಳಲ್ಲಿ ಅಸಮರ್ಪಕ ಕಸ ವಿಲೇವಾರಿ ಕುರಿತು ವಾರ್ಡ್ ಸಮಿತಿ ಸಭೆಯಲ್ಲಿ ಸದಸ್ಯರುಗಳು ತಮ್ಮ ಅಸಮಧಾನ ವ್ಯಕ್ತ ಪಡಿಸಿದ್ದು, ಈ ಬಗ್ಗೆ ಕೂಡಲೇ ಕ್ರಮ ವಹಿಸುವಂತೆ ಆರೋಗ್ಯ ಪರಿವೀಕ್ಷಕರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣದ ಬಗ್ಗೆ:-

**ವಾರ್ಡ್ ವ್ಯಾಪ್ತಿಯಲ್ಲಿ ಈವರೆಗಿನ ಕೋವಿಡ್ ಪ್ರಕರಣಗಳ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು, ಈ ಕೆಳಕಂಡಂತೆ ಮಾಹಿತಿ ಒದಗಿಸಿರುತ್ತಾರೆ.**

1. ಒಟ್ಟು ಪಾಸಿಟಿವ್ ಪ್ರಕರಣಗಳು– 7133
2. ಡಿಸ್ಚಾರ್ಜ್ ಆದ ಪ್ರಕರಣಗಳು – 6905
3. ಸಾವು – 128
4. ಚಾಲ್ತಿಯಲ್ಲಿರುವ ಪ್ರಕರಣಗಳು – 100

ಕೋವಿಡ್ ನಿಯಂತ್ರಣಕ್ಕೆ ಸಂಬಂಧಿಸಿದಂತೆ, ಮಾರ್ಗಸೂಚಿಯಂತೆ ಅಗತ್ಯ ಕ್ರಮ ವಹಿಸುವಂತೆ ಮತ್ತು ನಾಗರೀಕರಲ್ಲಿ ಜಾಗೃತಿ ಮೂಡಿಸಲು ಕ್ರಮ ವಹಿಸಲು ಸಭೆಯಲ್ಲಿ ಚರ್ಚಿಸಲಾಯಿತು.

(ಕ್ರಮ: **ಆರೋಗ್ಯ ಪರಿವೀಕ್ಷಕರು** / ಆರೋಗ್ಯ ಅಧಿಕಾರಿಗಳು, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ)

- **ವಾರ್ಡ್ ವ್ಯಾಪ್ತಿಯಲ್ಲಿ ಲಸಿಕಾ ಕಾರ್ಯಕ್ರಮದ ಬಗ್ಗೆ:-**

ಹಾಲಿ ಎಂ.ಇ.ಎ ಮೈದಾನದಲ್ಲಿ ಸಾರ್ವಜನಿಕರಿಗೆ ಲಸಿಕೆ ನೀಡುತ್ತಿರುವ ಕಾರ್ಯಕ್ರಮ ಸಮರ್ಪಕವಾಗಿ ನಡೆಯುತ್ತಿರುವುದಾಗಿ ಸಭೆಯಲ್ಲಿ ಡಾ॥ ವರುಣ್ ಕುಮಾರ್ ರವರು ತಿಳಿಸಿದರು ಹಾಗೂ ಲಸಿಕಾ ಕಾರ್ಯಕ್ಕೆ ಸಂಬಂಧಿಸಿದಂತೆ ಮಾಹಿತಿಯನ್ನು ವಾಟ್ಸ್ ಅಪ್ ಗ್ರೂಪ್ ನಲ್ಲಿ ಪ್ರಚುರಪಡಿಸುವಂತೆ ನೋಡಲ್ ಅಧಿಕಾರಿಗಳು ತಿಳಿಸಿದರು.

(ಸಹಿ) 27/06/21

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 14, ಬಾಗಲಗುಂಟೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

(ಸಹಿ) 27/06/2021

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಅಧಿಕಾರಿಗಳ ಮಾಹಿತಿಗಾಗಿ:-**

1) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
8) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
11) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12) ಕಛೇರಿ ಪ್ರತಿ.